## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸಂಶೋಧನಾ ಸಮಾಲೋಚಕರು ರಾಜ್ಯ ಯೋಜನಾ ಮಂಡಳಿಯವರಿಗೆ ನೀಡಲಾದ ಆರ್ಥಿಕ ಅಧಿಕಾರವನ್ನು ಕಾರ್ಯದರ್ಶಿ, ಯೋಜನಾ ಇಲಾಖೆ ರವರಿಗೆ ಪ್ರತ್ಯಾಯೋಜಿಸುವ ಬಗ್ಗೆ.

**ಓದಲಾಗಿದೆ:** 1 ಸರ್ಕಾರದ ಆದೇಶ ಸಂಖ್ಯೆ:ಪಿಡಿ 113ಎಸ್‌ಪಿಎಂ96 ದಿನಾಂಕ:17.05.1997.
2 ಸರ್ಕಾರದ ಆದೇಶ ಸಂಖ್ಯೆ: ಪಿಡಿ 72 ಎಸ್‌ಪಿಐ 2016 ದಿನಾಂಕ:16.08.2016

**ಪ್ರಸ್ತಾವನೆ:**

ರಾಜ್ಯ ಯೋಜನಾ ಮಂಡಳಿಗೆ ಆಯವ್ಯಯದಲ್ಲಿ ಒದಗಿಸಿರುವ ಒಟ್ಟಾರೆ ಹಣದ ಮಿತಿಯೊಳಗೆ ಸಂಬಂಧಿಸಿದ ಎಲ್ಲಾ ಕಾರ್ಯಕ್ರಮಗಳಿಗೂ ಹಣವನ್ನು ಉಪಯೋಗಿಸಲು ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ಇವರಿಗೆ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96,ದಿನಾಂಕ:10.07.96ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾದ ಅಧಿಕಾರದ ಪ್ರತ್ಯಾಯೋಜನೆಯಂತೆ ಅಧಿಕಾರ ಚಲಾಯಿಸಲು ಮೇಲೆ ಓದಲಾದ ಕ್ರ.ಸಂ.(1)ರ ಸರ್ಕಾರಿ ಆದೇಶದಲ್ಲಿ ಅಧಿಕಾರ ನೀಡಲಾಗಿದೆ. ತದನಂತರ ಈ ಆರ್ಥಿಕ ಅಧಿಕಾರವನ್ನು ಮೇಲೆ ಓದಲಾದ ಕ್ರ.ಸಂ.(2)ರ ಸರ್ಕಾರಿ ಆದೇಶದಲ್ಲಿ ಸಂಶೋಧನಾ ಸಮಾಲೋಚಕರು, ರಾಜ್ಯ ಯೋಜನಾ ಮಂಡಳಿ ಇವರಿಗೆ ಪ್ರತ್ಯಾಯೋಜಿಸಲಾಗಿದೆ. ಪ್ರಸ್ತುತ ಸಂಶೋಧನಾ ಸಮಾಲೋಚಕರು ರಾಜ್ಯ ಯೋಜನಾ ಮಂಡಳಿ ಈ ಹುದ್ದೆಯು ಖಾಲಿ ಇರುವುದರಿಂದ ರಾಜ್ಯ ಯೋಜನಾ ಮಂಡಳಿಯ ಆರ್ಥಿಕ ಅಧಿಕಾರವನ್ನು ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯವರಿಗೆ ಪ್ರತ್ಯಾಯೋಜಿಸುವ ಬಗ್ಗೆ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ:ಪಿಡಿ 136 ಎಸ್‌ಪಿಐ 2016,ದಿನಾಂಕ: 02.01.2017

ಪ್ರಸಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ:ಪಿಡಿ 113 ಎಸ್‌ಪಿಎಂ 96 ದಿನಾಂಕ:17.05.1997ರಲ್ಲಿ ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ರವರಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದಂತೆ ದಿನಾಂಕ:16.08.2016ರ ಸರ್ಕಾರಿ ಆದೇಶ ಸಂಖ್ಯೆ: ಪಿಡಿ 72 ಎಸ್‌ಪಿಐ 2016 ದಿನಾಂಕ:16.08.2016ರಲ್ಲಿ ಸಂಶೋಧನಾ ಸಮಾಲೋಚಕರು, ರಾಜ್ಯ ಯೋಜನಾ ಮಂಡಳಿ ಇವರಿಗೆ ನೀಡಲಾದ ಆರ್ಥಿಕ ಅಧಿಕಾರವನ್ನು ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೆ ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರಿಗೆ ಪ್ರತ್ಯಾಯೋಜಿಸಿ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ (ಎಸ್‌-3)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು-560001
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
3. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
4. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ. ವಿಕಾಸ ಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ರಾಜ್ಯ ಯೋಜನಾ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸಂಶೋಧನಾ ಸಮಾಲೋಚಕರು, ರಾಜ್ಯ ಯೋಜನಾ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ,ವಿಧಾನ ಸೌಧ,ಬೆಂಗಳೂರು
9. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ –ಎಸ್ 1&2,ಯೋಜನೆ ಕಾರ್ಯಕ್ರಮ ಸಂಯೋಜನೆ & ಸಾಂಖ್ಯಿಕ ಇಲಾಖೆ ,ಬಹುಮಹಡಿ ಕಟ್ಟಡ,ಬೆಂಗಳೂರು–01
11. ಸಹಾಯಕ ಖಜಾನಾಧಿಕಾರಿ, ಎಸ್–3 ಶಾಖೆ, ರಾಜ್ಯ ಯೋಜನಾ ಮಂಡಳಿ.
12. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು